ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರವರಿ, 2021

ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯ ಅನುಷ್ಠಾನಗೊಳಿಸುವಲ್ಲಿ ಸರ್ಕಾರದ ವೈಫಲ್ಯದ ಕುರಿತು.

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

292 (359) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 5 ವರ್ಷಗಳಿಂದ ರಾಜ್ಯದಲ್ಲಿ ಒಟ್ಟು ಎಷ್ಟು ರೈತರು ಕೃಷಿ ಸಂಬಂಧಿತ ಕಾರಣಗಳಿಂದ ಆತ್ಮಹತ್ಯೆ ಮಾಡಿಕೊಂಡು ಜೀವ ಕಳೆದು ಕೊಂಡಿರುತ್ತಾರೆ ; (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯ ವಿಮೆ ಕಂತು ಪಾವತಿಸಿದರೂ ಸಹಾ ತಾವು ಬೆಳೆದ ಬೆಳೆಯು ನಾಶವಾಗಿ ಸರ್ಕಾರದಿಂದ ಬರತಕ್ಕಂತಹ ವಿಮೆಗಾಗಿ ಅರ್ಜಿ ಸಲ್ಲಿಸಿದರೂ ಸಹ ಹಲವು ರೈತರಿಗೆ ವಿಮೆ ಪರಿಹಾರ ದೊರಕದಿರುವ ಕುರಿತು ಮಾನ್ಯ ಉಚ್ಚ ನ್ಯಾಯಲಯದಿಂದ ಯಾವುದಾದರೂ ಸೂಚನೆಗಳನ್ನೂ ಸರ್ಕಾರಕ್ಕೆ ನೀಡಲಾಗಿದೆಯೇ; ನೀಡಿದ್ದಲ್ಲಿ, ವಿವರ ಹಾಗೂ ಈ ಕುರಿತು ಸರ್ಕಾರದ ಕ್ರಮವೇನು ;

(ಇ) ಅನ್ನದಾತರಿಗೆ ಸಹಾಯ ಮಾಡುವ ಉದ್ದೇಶದಿಂದ ಜಾರಿಗೆ ಬಂದಿರುವ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಸರ್ಕಾರದ ವೈಫಲ್ಯಕ್ಕೆ ಕಾರಣಗಳೇನು; ಮತ್ತು ಸರ್ಕಾರದ ಮುಂದಿನ ಕ್ರಮವೇನು ? (ವಿವರ ನೀಡುವುದು)